np newz | www.npnewz.com | Contact@npnewz.com | 8951054014, 7483168889

# ಎನ್ ಪಿ ನ್ಯೂಸ್
NP NEWS
ಇದು ಭರವಸೆಯ ಬೆಳಕು

ಬುಧವಾರ 26 ನವೆಂಬರ್ 2025 • ಸಂಪುಟ 01 • ಸಂಚಿಕೆ 03 • ಪುಟ 01 • ಪ್ರಧಾನ ಸಂಪಾದಕರು: ವಾಸುದೇವ ಭಟ್ ನೆಕ್ಕರಪಲ್ಕೆ

# ಉಡುಪಿ ಶ್ರೀ ಕೃಷ್ಣ ಮಠಕ್ಕೆ ಪ್ರಧಾನಿ ಮೋದಿ ಭೇಟಿ



**ಉಡುಪಿ:** ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಇದೇ ನವೆಂಬರ್ 28 ರಂದು ಧಾರ್ಮಿಕ ಕೇಂದ್ರವಾದ ಉಡುಪಿಯ ಶ್ರೀಕೃಷ್ಣ ಮಠಕ್ಕೆ ಭೇಟಿ ನೀಡುತ್ತಿದ್ದು, ಈ ಭೇಟಿಯು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಹೆಚ್ಚಿನ ಮಹತ್ವ ಪಡೆದಿದೆ. ಪರ್ಯಾಯ ಪುತ್ತಿಗೆ ಶ್ರೀ ಸುಗುಣೇಂದ್ರ ತೀರ್ಥ ಶ್ರೀಪಾದರ ಆಹ್ವಾನದ ಮೇರೆಗೆ, ಮಠದಲ್ಲಿ ನಡೆಯುತ್ತಿರುವ 'ಲಕ್ಷ ಕಂಠ ಗೀತಾ ಪಾರಾಯಣ – ಬೃಹತ್ ಗೀತೋತ್ಸವ' ಕಾರ್ಯಕ್ರಮದಲ್ಲಿ ಪ್ರಧಾನಿಯವರು ಭಾಗವಹಿಸಲಿದ್ದಾರೆ. ಈ ಭೇಟಿಯ ಸಂದರ್ಭದಲ್ಲಿ, ಪ್ರಧಾನಿಯವರು ಶ್ರೀಕೃಷ್ಣ ದೇವರ ದರ್ಶನ ಪಡೆಯಲಿದ್ದು, ಮಠದ ನೂತನ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡುವ ಮೂಲಕ ರಾಜ್ಯದ ಧಾರ್ಮಿಕ ಮತ್ತು ಸಾಂಸ್ಕೃತಿಕ ಮಹತ್ವವನ್ನು ಹೆಚ್ಚಿಸಲಿದ್ದಾರೆ.

**ದರ್ಶನ ಮತ್ತು ಕಾರ್ಯಕ್ರಮಗಳ ವಿವರ:**

ಪ್ರಧಾನಿಯವರ ಕಚೇರಿಯಿಂದ (PMO) ಬಿಡುಗಡೆಗೊಂಡಿರುವ ತಾತ್ಕಾಲಿಕ ವೇಳಾಪಟ್ಟಿಯ ಪ್ರಕಾರ, ನರೇಂದ್ರ ಮೋದಿಯವರು ನವೆಂಬರ್ 28 ರಂದು ಮಧ್ಯಾಹ್ನ 12 ಗಂಟೆಗೆ ಶ್ರೀಕೃಷ್ಣ ಮಠಕ್ಕೆ ಆಗಮಿಸಲಿದ್ದಾರೆ. ಪ್ರಧಾನಿಯವರು ಮೊದಲು ಕೃಷ್ಣನ ದರ್ಶನ ಪಡೆಯಲಿದ್ದಾರೆ. ಇದು ಪ್ರಧಾನಿಯಾದ ನಂತರ ಅವರು ಶ್ರೀಕೃಷ್ಣ ಮಠಕ್ಕೆ ನೀಡುತ್ತಿರುವ ಮೊದಲ ಭೇಟಿಯಾಗಿದ್ದು, ಅವರು 2008 ರಲ್ಲಿ ಗುಜರಾತ್ ಮುಖ್ಯಮಂತ್ರಿಯಾಗಿದ್ದಾಗ ಇದೇ ಪುತ್ತಿಗೆ ಪರ್ಯಾಯದ ಅವಧಿಯಲ್ಲಿ ಭೇಟಿ ನೀಡಿದ್ದರು. ನಂತರ, ಅವರು ಸಾಮೂಹಿಕವಾಗಿ ನಡೆಯುವ ಲಕ್ಷ ಕಂಠ ಗೀತಾ ಪಾರಾಯಣ ಸಮಾರಂಭದಲ್ಲಿ ಭಾಗವಹಿಸಲಿದ್ದು, ಒಂದು ಲಕ್ಷಕ್ಕೂ ಹೆಚ್ಚು ಭಕ್ತರೊಂದಿಗೆ ಭಗವದ್ಗೀತೆಯ ಆಯ್ದ ಶ್ಲೋಕಗಳನ್ನು ಪಠಿಸಲಿದ್ದಾರೆ. ಇದರೊಂದಿಗೆ, ಮಠದಲ್ಲಿ ನೂತನವಾಗಿ ಚಿನ್ನದ ಲೇಪನ ಮಾಡಲಾದ ಸುವರ್ಣ ತೀರ್ಥ ಮಂಟಪ ಮತ್ತು ಕನಕನ ಕಿಂಡಿಯ ಚಿನ್ನದ ಹೊದಿಕೆಯನ್ನು ಪ್ರಧಾನಿಯವರು ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದ ನಂತರ ಅವರು ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ.

**ಭದ್ರತೆ ಮತ್ತು ರೋಡ್‌ಶೋ:**

ಪ್ರಧಾನಿ ಮೋದಿಯವರ ಭೇಟಿಯ ಹಿನ್ನೆಲೆಯಲ್ಲಿ ಉಡುಪಿ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ಬಿಗಿ ಭದ್ರತಾ ವ್ಯವಸ್ಥೆಗಳನ್ನು ಕೈಗೊಂಡಿದೆ. Special Protection Group (SPG) ತಂಡವು ಕಾರ್ಯಕ್ರಮದ ಸ್ಥಳ ಮತ್ತು ಮಾರ್ಗವನ್ನು ಈಗಾಗಲೇ ಪರಿಶೀಲಿಸಿದೆ. ಪ್ರಧಾನಿಯವರ ಸ್ವಾಗತಕ್ಕೆ ಸಿದ್ಧತೆ ನಡೆಸಿರುವ ಬಿಜೆಪಿ ಜಿಲ್ಲಾ ಘಟಕದ ಪ್ರಕಾರ, ಬನ್ನಂಜೆಯ ಡಾ. ವಿ. ಎಸ್. ಆಚಾರ್ಯ ಬಸ್ ನಿಲ್ದಾಣದ ಬಳಿಯ ಶ್ರೀ ನಾರಾಯಣ ಗುರು ಸರ್ಕಲ್‌ನಿಂದ ಕಲ್ಸಂಕ ಜಂಕ್ಷನ್‌ವರೆಗೆ ರೋಡ್‌ಶೋ ನಡೆಯುವ ಸಾಧ್ಯತೆ ಇದೆ. ಈ ರೋಡ್‌ಶೋನಲ್ಲಿ 30 ಸಾವಿರಕ್ಕೂ ಹೆಚ್ಚು ಜನರು ಭಾಗವಹಿಸುವ ನಿರೀಕ್ಷೆಯಿದೆ. ಈ ಭೇಟಿಯ ಪ್ರಯುಕ್ತ, ಉಡುಪಿ ನಗರಸಭೆ ವ್ಯಾಪ್ತಿಯ ಆಯ್ದ ಪ್ರದೇಶಗಳ ಅಂಗನವಾಡಿ, ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ನವೆಂಬರ್ 28 ರಂದು ಜಿಲ್ಲಾಧಿಕಾರಿಗಳು ರಜೆ ಘೋಷಿಸಿದ್ದಾರೆ.





**ರಕ್ಷಣಾ ವ್ಯವಸ್ಥೆ:** ಪ್ರಧಾನಿಯವರ ಭೇಟಿಯ ಹಿನ್ನೆಲೆಯಲ್ಲಿ ಎಸ್‌ಪಿಜಿ (SPG) ತಂಡವು ಭದ್ರತಾ ವ್ಯವಸ್ಥೆಗಳನ್ನು ಪರಿಶೀಲಿಸುತ್ತಿದ್ದು, ನಗರ ವ್ಯಾಪ್ತಿಯಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಮತ್ತು ಡ್ರೋನ್ ನಿಷೇಧವನ್ನು ಘೋಷಿಸಲಾಗಿದೆ. ಜಿಲ್ಲಾಡಳಿತವು ವಾಹನ ಸಂಚಾರಕ್ಕೆ ನಿರ್ಬಂಧ ಮತ್ತು ಮಾರ್ಗ ಬದಲಾವಣೆಯನ್ನು ಘೋಷಿಸಿದೆ.

**ಇತಿಹಾಸದ ನಂಟು:** ಪ್ರಧಾನಿ ನರೇಂದ್ರ ಮೋದಿಯವರು ಪ್ರಧಾನಿಯಾದ ನಂತರ ಇದು ಉಡುಪಿ ಶ್ರೀಕೃಷ್ಣ ಮಠಕ್ಕೆ ನೀಡುತ್ತಿರುವ ಮೊದಲ ಭೇಟಿಯಾಗಿದೆ. ಅವರು ಗುಜರಾತ್ ಮುಖ್ಯಮಂತ್ರಿಯಾಗಿದ್ದಾಗ, 2008ರಲ್ಲಿ ಒಮ್ಮೆ ಶ್ರೀಕೃಷ್ಣನ ದರ್ಶನ ಪಡೆದಿದ್ದರು.

**ಮಠದಲ್ಲಿ ಕಾರ್ಯಕ್ರಮ:** ನೂತನವಾಗಿ ಚಿನ್ನದ ಲೇಪನ ಮಾಡಲಾದ ಸುವರ್ಣ ತೀರ್ಥ ಮಂಟಪ ಮತ್ತು ಕನಕನ ಕಿಂಡಿಯ ಚಿನ್ನದ ಹೊದಿಕೆಯನ್ನು ಉದ್ಘಾಟಿಸಲಿದ್ದಾರೆ. 'ಲಕ್ಷ ಕಂಠ ಗೀತಾ ಪಾರಾಯಣ' ಕಾರ್ಯಕ್ರಮದಲ್ಲಿ ಭಾಗವಹಿಸಿ, ಒಂದು ಲಕ್ಷಕ್ಕೂ ಹೆಚ್ಚು ಭಕ್ತರೊಂದಿಗೆ ಭಗವದ್ಗೀತೆಯ ಆಯ್ದ ಶ್ಲೋಕಗಳನ್ನು ಪಠಿಸಲಿದ್ದಾರೆ. ಸಾರ್ವಜನಿಕ ಸಭೆಯುನ್ನುದ್ದೇಶಿಸಿ ಮಾತನಾಡಲಿದ್ದಾರೆ.



**ಭಕ್ತರಿಗೆ ಸೂಚನೆ:**
ಪ್ರಧಾನಿಯವರ ಭೇಟಿಯ ಹಿನ್ನೆಲೆಯಲ್ಲಿ ನವೆಂಬರ್ 28 ರಂದು ಶ್ರೀಕೃಷ್ಣ ಮಠದ ದರ್ಶನ ಸಮಯದಲ್ಲಿ ಬದಲಾವಣೆಗಳನ್ನು ಮಾಡಲಾಗಿದೆ. ಭಕ್ತಾದಿಗಳು ನಿಗದಿತ ಸಮಯದ ಕುರಿತು ಮಠದ ಸೂಚನೆಗಳನ್ನು ಪಾಲಿಸಲು ಕೋರಲಾಗಿದೆ.

## ಮಂಗಳೂರು ತಲವಾರು ದಾಳಿ: ಇಬ್ಬರ ಬಂಧನ, ತೀವ್ರ ಶೋಧ



**ಮಂಗಳೂರು:** ಮಂಗಳೂರಿನ ಎಡಪದವು ಪ್ರದೇಶದಲ್ಲಿ ಇತ್ತೀಚೆಗೆ ನಡೆದ ತಲವಾರು ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಇಬ್ಬರು ಪ್ರಮುಖ ಆರೋಪಿಗಳನ್ನು ಬಂಧಿಸಿದ್ದಾರೆ. ನವೆಂಬರ್ 24, 2025ರಂದು ಅಖಿಲೇಶ್ ಎಂಬ ಯುವಕನ ಮೇಲೆ ನಾಲ್ವರು ದುಷ್ಕರ್ಮಿಗಳು ತಲವಾರಿನಿಂದ ದಾಳಿ ನಡೆಸಿ ಗಾಯಗೊಳಿಸಿದ್ದರು. ಗಾಯಗೊಂಡ ಯುವಕ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ. ಬಂಧಿತರನ್ನು ವಿಚಾರಣೆಗೊಳಪಡಿಸಲಾಗಿದ್ದು, ದಾಳಿಯ ಉದ್ದೇಶವನ್ನು ಪತ್ತೆಹಚ್ಚಲಾಗುತ್ತಿದೆ. ಪ್ರಕರಣದಲ್ಲಿ ಭಾಗಿಯಾದ ಇತರ ಆರೋಪಿಗಳಿಗಾಗಿ ಪೊಲೀಸರು ತೀವ್ರ ಶೋಧ ನಡೆಸುತ್ತಿದ್ದಾರೆ.

## ಅಯೋಧ್ಯೆ ರಾಮನಿಗೆ ಉಡುಪಿಯ 'ಸ್ವರ್ಣ ಜ್ಯುವೆಲ್ಲರ್ಸ್'ನಿಂದ ಸ್ವರ್ಣಾಭರಣ ಸಮರ್ಪಣೆ



**ಉಡುಪಿ:** ಐತಿಹಾಸಿಕ ಅಯೋಧ್ಯೆ ರಾಮಮಂದಿರದ ಮೊದಲ ಮಹಡಿಯಲ್ಲಿರುವ ಶ್ರೀರಾಮ ಪಟ್ಟಾಭಿಷೇಕ ವಿಗ್ರಹಗಳಾದ ಶ್ರೀರಾಮ, ಸೀತಾ, ಲಕ್ಷ್ಮಣ, ಭರತ, ಶತ್ರುಘ್ನ ಹಾಗೂ ಹನುಮಂತ ಸೇರಿ ಆರು ವಿಗ್ರಹಗಳಿಗೂ ಇದೀಗ ಉಡುಪಿಯ ಮೆರುಗು ದೊರೆತಿದೆ. ಉಡುಪಿಯ ಪ್ರಸಿದ್ಧ 'ಸ್ವರ್ಣ ಜ್ಯುವೆಲ್ಲರ್ಸ್' ಸಂಸ್ಥೆಯು ಮಂದಿರ ಟ್ರಸ್ಟ್‌ನ ಮನವಿ ಮೇರೆಗೆ ಈ ಸಮಗ್ರ ಸ್ವರ್ಣಾಭರಣಗಳನ್ನು ತಯಾರಿಸಿ ಅರ್ಪಿಸಿದೆ. ಗುಜ್ಜಾಡಿ ದೀಪಕ್ ನಾಯಕ್ ನೇತೃತ್ವದ ನುರಿತ ತಂಡವು ಕೇವಲ ಹತ್ತು ದಿನಗಳ ದಾಖಲೆ ಅವಧಿಯಲ್ಲಿ ವಿಗ್ರಹಗಳಿಗೆ ಅಗತ್ಯವಿರುವ ಕಿರೀಟ, ಕಂಠೀಹಾರ, ಕರ್ಣ ಕುಂಡಲ (ಕಿವಿಯೋಲೆ), ಪಾದದ ನೂಪುರ ಸೇರಿದಂತೆ ತಲೆ ಮತ್ತು ಪಾದದ ವರೆಗಿನ ಎಲ್ಲ ಆಭರಣಗಳನ್ನು ಯಶಸ್ವಿಯಾಗಿ ಸಿದ್ಧಪಡಿಸಿದೆ. ಈ ಆಭರಣಗಳನ್ನು ಇತ್ತೀಚೆಗೆ (ನವೆಂಬರ್ 25, ಸೋಮವಾರ) ಗುಜ್ಜಾಡಿ ದೀಪಕ್ ನಾಯಕ್ ಮತ್ತು ತಂಡವು ಅಯೋಧ್ಯೆಗೆ ತೆರಳಿ, ಅಲ್ಲಿನ ಅರ್ಚಕರು ಮತ್ತು ಟ್ರಸ್ಟ್ ಸದಸ್ಯರ ಸಮ್ಮುಖದಲ್ಲಿ ವಿಗ್ರಹಗಳಿಗೆ ತೊಡಿಸಿದೆ.ಸಂಸ್ಥೆಯ ಹಿರಿಯರಾದ ಗುಜ್ಜಾಡಿ ರಾಮದಾಸ ನಾಯಕರು ಮಾತನಾಡಿ, "ಅಯೋಧ್ಯೆ ಶ್ರೀರಾಮನಿಗೆ ಸ್ವರ್ಣಾಲಂಕಾರ ಸಿದ್ಧಪಡಿಸುವ ಅವಕಾಶ ಸಿಕ್ಕಿರುವುದು ನಮ್ಮ ಕುಟುಂಬಕ್ಕೆ ಶಾಶ್ವತವಾದ ಮತ್ತು ಅವಿಸ್ಮರಣೀಯ ಗೌರವ," ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

## ಮುರುಘಾಶ್ರೀ ಪೋಕ್ಸೋ ಪ್ರಕರಣ ಶಿವಮೂರ್ತಿ ಸ್ವಾಮೀಜಿ 'ನಿರ್ದೋಷಿ'!



**ಚಿತ್ರದುರ್ಗ:** ಚಿತ್ರದುರ್ಗದ ಮುರುಘಾ ಮಠದ ಶಿವಮೂರ್ತಿ ಸ್ವಾಮೀಜಿ ಅವರ ವಿರುದ್ಧ ದಾಖಲಾಗಿದ್ದ ಪೋಕ್ಸೋ (POCSO) ಪ್ರಕರಣಕ್ಕೆ ಸಂಬಂಧಿಸಿದಂತೆ 2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು ಇಂದು (ನ. 26, ಬುಧವಾರ) ಮಹತ್ವದ ತೀರ್ಪು ನೀಡಿದ್ದು, ಸ್ವಾಮೀಜಿಯನ್ನು ನಿರ್ದೋಷಿ ಎಂದು ಘೋಷಿಸಿದೆ. ಈ ಪ್ರಕರಣವು 2022ರ ಆಗಸ್ಟ್ 26 ರಂದು ಮೈಸೂರಿನ ನಜರಾಬಾದ್ ಪೊಲೀಸ್ ಠಾಣೆಯಲ್ಲಿ ಇಬ್ಬರು ಅಪ್ರಾಪ್ತೆಯರ ಹೇಳಿಕೆಯನ್ನಾಧರಿಸಿ ದಾಖಲಾಗಿತ್ತು. ಸ್ವಾಮೀಜಿಯವರು 2022ರ ಸೆಪ್ಟೆಂಬರ್ 1 ರಂದು ಬಂಧನಕ್ಕೊಳಗಾಗಿ, ಸುಮಾರು 14 ತಿಂಗಳ ಕಾಲ ಜೈಲಿನಲ್ಲಿದ್ದು, 2024ರ ಅಕ್ಟೋಬರ್ 7 ರಂದು ಜಾಮೀನಿನ ಮೇಲೆ ಬಿಡುಗಡೆಗೊಂಡಿದ್ದರು.

## ರಾಮಮಂದಿರದಲ್ಲಿ ಪ್ರಧಾನಿ ಮೋದಿಯಿಂದ ಭಗವಾಧ್ವಜಾರೋಹಣ



**ಅಯೋಧ್ಯೆ:** ಶ್ರೀ ರಾಮಮಂದಿರದಲ್ಲಿ ಮಂಗಳವಾರ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಪವಿತ್ರ ಭಗವಾಧ್ವಜಾರೋಹಣವನ್ನು ನೆರವೇರಿಸಿದರು. ಈ ಐತಿಹಾಸಿಕ ಕಾರ್ಯಕ್ರಮದಲ್ಲಿ ಮಂದಿರದ ಟ್ರಸ್ಟಿಗಳಾದ ಉಡುಪಿ ಪೇಜಾವರ ಮಠಾಧೀಶರಾದ ಶ್ರೀ ವಿಶ್ವಪ್ರಸನ್ನ ತೀರ್ಥ ಶ್ರೀಪಾದರು, ಆರ್.ಎಸ್.ಎಸ್. ಮುಖ್ಯಸ್ಥ ಮೋಹನ್ ಜೀ ಭಾಗವತ್, ಟ್ರಸ್ಟ್ ಕಾರ್ಯದರ್ಶಿ ಚಂಪತ್ ರಾಯ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಸಮಾರಂಭಕ್ಕೆ ದೇಶಾದ್ಯಂತದಿಂದ ಸಾವಿರಾರು ಸಾಧು–ಸಂತರು ಮತ್ತು ಮಂದಿರ ನಿರ್ಮಾಣಕ್ಕೆ ದೇಣಿಗೆ ನೀಡಿದ ದಾನಿಗಳನ್ನು ಆಹ್ವಾನಿಸಲಾಗಿತ್ತು.




## ಪ್ರಧಾನಿ ಮೋದಿ ಭೇಟಿ ಹಿನ್ನೆಲೆ ಉಡುಪಿ ನಗರದ ಶಾಲೆಗಳಿಗೆ ನ. 28 ರಂದು ರಜೆ ಘೋಷಣೆ!



**ಉಡುಪಿ:** ಸನ್ಮಾನ್ಯ ಭಾರತದ ಪ್ರಧಾನ ಮಂತ್ರಿಯವರು ದಿನಾಂಕ 28.11.2025 ರಂದು ಉಡುಪಿ ಜಿಲ್ಲೆಯ ಶ್ರೀ ಕೃಷ್ಣಮಠಕ್ಕೆ ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ, ಭದ್ರತೆ, ಶಿಷ್ಟಾಚಾರ ಮತ್ತು ಸಾರ್ವಜನಿಕ ಹಿತದೃಷ್ಟಿಯಿಂದ ಮುಂಜಾಗ್ರತಾ ಕ್ರಮವಾಗಿ ಉಡುಪಿ ನಗರದ ಕೆಲವು ಶಾಲಾ ವ್ಯಾಪ್ತಿಯಲ್ಲಿ ರಜೆ ಘೋಷಿಸಲಾಗಿದೆ. ಸನ್ಮಾನ್ಯ ಭಾರತದ ಪ್ರಧಾನ ಮಂತ್ರಿಯವರ ಭೇಟಿ ಸಂದರ್ಭದಲ್ಲಿ ನಿಯಮಾನುಸಾರ ಶಿಷ್ಟಾಚಾರವನ್ನು ಪಾಲಿಸಬೇಕಾಗುವುದರಿಂದ, ಹಾಗೂ ಕೇಂದ್ರ ಸಚಿವರು, ಕರ್ನಾಟಕ ರಾಜ್ಯಪಾಲರು, ಮುಖ್ಯಮಂತ್ರಿಗಳು ಸಹ ಬರುವ ಸಾಧ್ಯತೆ ಇರುವುದರಿಂದ, ಕಾರ್ಯಕ್ರಮ ಸುಗಮವಾಗಿ ಜರುಗಲು ಪೋಲೀಸ್ ಅಧೀಕ್ಷಕರು ಸೂಕ್ತ ಭದ್ರತೆಗಾಗಿ ಮನವಿ ಮಾಡಿದ್ದರು. ಕಾರ್ಯಕ್ರಮಗಳನ್ನು ಸುಸೂತ್ರವಾಗಿ ಮತ್ತು ದೋಷ ರಹಿತವಾಗಿ ನಡೆಸಲು ಹಾಗೂ ಶಾಲಾ ಮಕ್ಕಳ ಸಂಚಾರಕ್ಕೆ ತೊಡಕು ಉಂಟಾಗುವುದನ್ನು ತಪ್ಪಿಸಲು ಈ ಕ್ರಮ ಕೈಗೊಳ್ಳಲಾಗಿದೆ. ಈ ಹಿನ್ನೆಲೆಯಲ್ಲಿ ಮಾನ್ಯ ಜಿಲ್ಲಾಧಿಕಾರಿಗಳಾದ ಸ್ವರೂಪ ಟಿ. ಕೆ. ಯವರು, ಉಡುಪಿ ನಗರ, ಮಲ್ಪೆ ಮತ್ತು ಮಣಿಪಾಲ ಠಾಣಾ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ, ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ದಿನಾಂಕ 28.11.2025 ರಂದು ಒಂದು ದಿನದ ಮಟ್ಟಿಗೆ ರಜೆಯನ್ನು ಘೋಷಿಸಿ ಆದೇಶಿಸಿದ್ದಾರೆ. ಪ್ರಸ್ತುತ ನೀಡಿರುವ ರಜೆ ಅವಧಿಯಲ್ಲಿ ನಿರ್ವಹಿಸಬೇಕಾದ ಪಠ್ಯವನ್ನು ಇತರೆ ಸಾರ್ವತ್ರಿಕ ರಜಾ ದಿನಗಳಂದು ಸರಿದೂಗಿಸಿಕೊಂಡು ನಿರ್ವಹಿಸಬೇಕೆಂದು ತಿಳಿಸಿದ್ದಾರೆ.

## ಸಿಎಂ ಮಾತು ನಮಗೆ ವೇದವಾಕ್ಯ, ಅವರು ಪಕ್ಷದ ದೊಡ್ಡ ಶಕ್ತಿ: ಡಿ.ಕೆ.ಶಿವಕುಮಾರ್



**ಬೆಂಗಳೂರು:** ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ (ಡಿಕೆಶಿ) ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾತು ನಮಗೆ ವೇದವಾಕ್ಯವಿದ್ದಂತೆ ಮತ್ತು ಅವರು ಪಕ್ಷಕ್ಕೆ ದೊಡ್ಡ ಆಸ್ತಿ ಎಂದು ಸೋಮವಾರ ಸ್ಪಷ್ಟಪಡಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೈಕಮಾಂಡ್ ನಿರ್ಧಾರಕ್ಕೆ ನಾವೆಲ್ಲರೂ ಬದ್ಧರಾಗಿರಬೇಕು ಎಂಬ ಸಿದ್ದರಾಮಯ್ಯ ಅವರ ಹೇಳಿಕೆಗೆ ಪ್ರತಿಕ್ರಿಯಿಸಿ, ತಾವು ಅವರ ಮಾರ್ಗದರ್ಶನದಲ್ಲಿ ಕೆಲಸ ಮಾಡುತ್ತಿದ್ದೇವೆ ಎಂದರು.ಇನ್ನು, "ಏನೇ ತೀರ್ಮಾನ ಆಗಿದ್ದರೂ ಅದು ಕೊಠಡಿಯ ಆಂತರಿಕ ಚೌಕಟ್ಟಿನೊಳಗೆ ಆಗಿರುತ್ತದೆ. ಅದನ್ನು ನಾನು ಮತ್ತು ಪಕ್ಷದ ಹೈಕಮಾಂಡ್ ಬಗೆಹರಿಸಿಕೊಳ್ಳುತ್ತೇವೆ," ಎಂದು ಡಿಕೆಶಿ ಹೇಳಿದರು. ಅಧಿಕಾರ ಹಂಚಿಕೆ ಬಗ್ಗೆ ಯಾರೂ ಮಾತನಾಡಿಲ್ಲ, ನನಗೂ ಮತ್ತು ಯಾರಿಗೂ ಯಾವುದೇ ಗೊಂದಲಗಳಿಲ್ಲ ಎಂದು ಅವರು ಪುನರುಚ್ಚರಿಸಿದರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ದೆಹಲಿಯಲ್ಲಿ ಭೇಟಿ ಮಾಡಿರುವುದಾಗಿ ತಿಳಿಸಿದ ಡಿಕೆಶಿ, ಅನಗತ್ಯವಾಗಿ ಅವರಿಗೆ ತೊಂದರೆ ಕೊಡುವುದು ಬೇಡ ಎಂದು ಹೇಳಿ, "ಸಂದರ್ಭ ಬಂದಾಗ ಭೇಟಿ ಮಾಡುತ್ತೇನೆ" ಎಂದರು.

## ಬನ್ನಂಜೆ–ಕಲ್ಸಂಕ ಮಾರ್ಗದಲ್ಲಿ ಪ್ರಧಾನಿ ಆಗಮನ ಕುತ್ಯಾರು ನವೀನ್ ಶೆಟ್ಟಿ ಮಾಹಿತಿ



ಪ್ರಧಾನಿ ನರೇಂದ್ರ ಮೋದಿ ಅವರು ನವೆಂಬರ್ 28, ಶುಕ್ರವಾರ, ಉಡುಪಿಯಲ್ಲಿ ರೋಡ್ ಶೋ ನಡೆಸಲಿದ್ದು, ಶ್ರೀ ಕೃಷ್ಣ ಮಠಕ್ಕೆ ಭೇಟಿ ನೀಡಿ ದರ್ಶನ ಪಡೆಯಲಿದ್ದಾರೆ. ರೋಡ್ ಶೋ ಬೆಳಿಗ್ಗೆ 11.40ಕ್ಕೆ ಶ್ರೀ ನಾರಾಯಣ ಗುರು ಸರ್ಕಲ್‌ನಿಂದ ಕಲ್ಸಂಕ ಜಂಕ್ಷನ್ ವರೆಗೆ ಸಾಗಲಿದ್ದು, ನಂತರ ಸಾಮೂಹಿಕ 'ಲಕ್ಷ ಕಂಠ ಗೀತಾ ಪಾರಾಯಣ' ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಈ ಭೇಟಿಗಾಗಿ ಜಿಲ್ಲಾ ಬಿಜೆಪಿ ನೇತೃತ್ವದಲ್ಲಿ ಭರ್ಜರಿ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ.

ನೇರಪ್ರಸಾರ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ 7483168889 89510 54014